ರಾಜ್ಯದಲ್ಲಿ ಹೊಸ ಕಾಲೇಜುಗಳು

644(1290), ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ)

ಅ) ಕಳೆದ ಎರಡು ವರ್ಷಗಳಲ್ಲಿ ಉನ್ನತ ಶಿಕ್ಷಣ ಇಲಾಖೆಯಿಂದ ಹೊಸ ಕಾಲೇಜುಗಳ ಸ್ಥಾಪನೆಗೆ ಅನುಮತಿ ಕೋರಿ ಸಲ್ಲಿಸಲಾಗಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು; ಈ ಅವಧಿಯಲ್ಲಿ ಸ್ಥಾಪಿಸಲಾಗಿರುವ ಕಾಲೇಜುಗಳ ಸಂಖ್ಯೆ ಎಷ್ಟು;

ಆ) ರಾಜ್ಯದಲ್ಲಿ ಇಲಾಖೆಯಿಂದ ಅನುಮತಿ ಪಡೆಯದೇ ಅನಧಿಕೃತವಾಗಿ ನಡೆಯುತ್ತಿರುವ ಕಾಲೇಜುಗಳ ವಿರುದ್ಧ ಸರ್ಕಾರ ಈ ಅವಧಿಯಲ್ಲಿ ಕೈಗೊಂಡಿರುವ ಕ್ರಮಗಳೇನು; ಮೇಲ್ಕಂಡ ಅವಧಿಯಲ್ಲಿ ಇಂತಹ ಎಷ್ಟು ಪ್ರಕರಣಗಳು ಪತ್ತೆಯಾಗಿವೆ?

ಶ್ರೀ ಆರ್.ವಿ.ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಪ್ರಸ್ತಾವನೆಗಳ ಸಂಖ್ಯೆ: 144
ಮಂಜೂರಾಗಿರುವ ಸಂಖ್ಯೆ: 51
ಸ್ಥಾಪಿಸಿರುವ ಕಾಲೇಜುಗಳ ಸಂಖ್ಯೆ: 4

ಆ) ಇಂತಹ ಪ್ರಕರಣಗಳು ಕಂಡು ಬಂದಿರುವುದಿಲ್ಲ.

ಪ್ರವಾಸೋದ್ಯಮ ಇಲಾಖೆಯ ಹೋಟೆಲ್‌ಗಳು

645(1291), ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ)

ಅ) ರಾಜ್ಯದಲ್ಲಿ ಪ್ರವಾಸೋದ್ಯಮ ಇಲಾಖೆಗೆ ಸೇರಿದ ಹೋಟೆಲ್‌ಗಳು ಮತ್ತು ರಿಸಾರ್ಟ್‌ಗಳ ಸಂಖ್ಯೆ ಎಷ್ಟು; ಅವುಗಳು ಯಾವುವು; (ವಿವರ ಒದಗಿಸುವುದು)

ಆ) ಇವುಗಳ ಪೈಕಿ ಇಲಾಖೆ ನಿರ್ವಹಿಸುತ್ತಿರುವ ಹೋಟೆಲ್/ರಿಸಾರ್ಟ್‌ಗಳ ಸಂಖ್ಯೆ ಎಷ್ಟು;